**Akashvani : Bangalore**
**Regional Bulletin In Kannada**
**14.03.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**14.03.2025 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ರಾಜ್ಯದೆಲ್ಲೆಡೆ ಮಾದರಿ ಕ್ರೋಡಿಕೃತ ನಗರ ಸಮುಚ್ಛಯ ನಿರ್ಮಾಣ ಯೋಜನೆಗೆ ಸರ್ಕಾರ ನಿರ್ಧಾರ- ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್**

**೨. ಬೆಂಗಳೂರಿನಲ್ಲಿ ನೀರಿನ ದರ ಒಂದು ಲೀಟರ್‌ಗೆ ಒಂದು ಪೈಸೆ ಏರಿಕೆ ಮಾಡಲು ಸರ್ಕಾರ ಚಿಂತನೆ**

**೩. ೧೫೮ ನ್ಯಾಯಾಧೀಶರ ನೇಮಕಾತಿ ಪ್ರಕ್ರಿಯೆಗೆ ಸುಪ್ರೀಂಕೋರ್ಟ್ ಆದೇಶದವರೆಗೆ ತಡೆ; ಹೈಕೋರ್ಟ್ ರಿಜಿಸ್ಟ್ರಾರ್ ಸ್ಪಷ್ಟನೆ**

**೪. ರಾಜ್ಯದ ವಿವಿಧೆಡೆ ಹೋಳಿ ಹಬ್ಬದ ಸಂಭ್ರಮ; ಬಣ್ಣದಲ್ಲಿ ಮಿಂದೆದ್ದ ಜನತೆ**

**<><*<><>*><>**

ರಾಜ್ಯದಲ್ಲಿ ಮಾದರಿ ಇಂಟಿಗ್ರೇಟೆಡ್ ಟೌನ್ ಶಿಪ್ ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆ ಎಂದು ವಿಧಾನಸಭೆಯಲ್ಲಿಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ. ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್ ಸದಸ್ಯರಾದ ರೂಪಕಲಾ ಪ್ರಶ್ನೆಗೆ ಉತ್ತರಿಸಿದ ಸಚಿವರು, ನಗರಾಭಿವೃದ್ಧಿ ಇಲಾಖೆ ವತಿಯಿಂದ ಮೊದಲ ಬಾರಿಗೆ ರಾಜ್ಯದಲ್ಲಿ ಇಂಟಿಗ್ರೇಟೆಡ್ ಟೌನ್ ಶಿಪ್ ನಿರ್ಮಾಣಕ್ಕೆ ಸರ್ಕಾರ ಮುಂದಾಗಿದೆ. ಕಲಬುರಗಿ, ತುಮಕೂರು ಸೇರಿದಂತೆ ರಾಜ್ಯದ ಆರೇಳು ಕಡೆ ಟೌನ್ ಶಿಪ್ ನಿರ್ಮಾಣ ಮಾಡುವ ಯೋಜನೆ ರೂಪಿಸಲಾಗಿದೆ ಎಂದು ಸದನಕ್ಕೆ ತಿಳಿಸಿದರು. ಕೆಜಿಎಫ್ ಕ್ಷೇತ್ರದಲ್ಲಿ ೯೦೦ ಎಕರೆ ಪ್ರದೇಶದ ಬಿಇಎಂಎಲ್ ಜಾಗವನ್ನು ಸರ್ಕಾರ ಪಡೆದುಕೊಂಡಿದ್ದು, ಅದರಲ್ಲಿ ೬೦೦ ಎಕರೆ ಬೃಹತ್ ಕೈಗಾರಿಕಾ ಇಲಾಖೆ ಹೂಡಿಕೆಗಾಗಿ ಬಳಕೆ ಮಾಡಿಕೊಳ್ಳಲಾಗುವುದು. ಇನ್ನುಳಿದ ೩೦೦ ಎಕರೆ ಪ್ರದೇಶದಲ್ಲಿ ಟೌನ್ ಶಿಪ್ ನಿರ್ಮಾಣ ಮಾಡಲಾಗುತ್ತಿದೆ. ಪಿಪಿಪಿ ಮಾದರಿಯಲ್ಲಿ ಈ ಯೋಜನೆ ಕೈಗೆತ್ತಿಕೊಳ್ಳಲು ತೀರ್ಮಾನಿಸಿದ್ದು, ವರ್ಷದೊಳಗೆ ಮುಕ್ತಾಯಗೊಳಿಸುವ ಉದ್ದೇಶ ಹೊಂದಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಬೆಂಗಳೂರಿನಲ್ಲಿ ನೀರಿನ ದರ ಒಂದು ಲೀಟರ್‌ಗೆ ಒಂದು ಪೈಸೆಯಷ್ಟು ಏರಿಕೆ ಮಾಡಲು ಚಿಂತನೆ ನಡೆಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನಪರಿಷತ್‌ನಲ್ಲಿಂದು ತಿಳಿಸಿದ್ದಾರೆ. ಮಂಡಳಿಯ ೭ ರಿಂದ ೮ ಪೈಸೆಯಷ್ಟು ಏರಿಸಲು ಪ್ರಸ್ತಾಪ ಸಲ್ಲಿಸಿದ್ದು, ಈ ಬಗ್ಗೆ ಬೆಂಗಳೂರಿನ ಶಾಸಕರ ಬಳಿ ಚರ್ಚಿಸಲಾಗುವುದು ಎಂದು ಹೇಳಿದ್ದಾರೆ. ಶೂನ್ಯ ವೇಳೆಯಲ್ಲಿ ಕಾಂಗ್ರೆಸ್ ಸದಸ್ಯ ರಾಮೋಜಿ ಗೌಡ ವಿಷಯ ಪ್ರಸ್ತಾಪಿಸಿ, ಬೇಸಿಗೆ

ಆರಂಭವಾಗುತ್ತಿದ್ದು, ಬೆಂಗಳೂರಿನ ಪೂರ್ವ ಭಾಗದಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗಿದೆ. ಶೀಘ್ರವೇ ಕಾವೇರಿ ನೀರು ಒದಗಿಸಬೇಕು ಎಂದು ಸದನದ ಗಮನ ಸೆಳೆದರು. ಇದಕ್ಕೆ ಪ್ರತಿಕ್ರಿಯಿಸಿ ಸಚಿವ ಡಿ.ಕೆ.ಶಿವಕುಮಾರ್, ವಸತಿ ಸಮುಚ್ಚಯಗಳು ಅನುಮತಿ ಪಡೆಯದೆ ಅಕ್ರಮವಾಗಿ ನೀರಿನ ಸಂಪರ್ಕ ಪಡೆದಿದ್ದು, ನೋಟಿಸ್ ನೀಡಲಾಗಿದೆ ಎಂದು ತಿಳಿಸಿದರು. ಇದೇ ವೇಳೆ ಬೆಂಗಳೂರಿನ ಕಸದ ಸಮಸ್ಯೆಯ ಬಗ್ಗೆ ಸದಸ್ಯ ನಾಗರಾಜ್ ಯಾದವ್ ಪ್ರಸ್ತಾಪಿಸಿದರು. ಇದಕ್ಕೆ ಉತ್ತರ ನೀಡಿದ ಡಿ.ಕೆ.ಶಿವಕುಮಾರ್, ಬೆಂಗಳೂರಿನ ಶಾಸಕರು ಸಹಕರಿಸುವಂತೆ ಮನವಿ ಮಾಡಿದರು. ಕಸದಿಂದ ವಿದ್ಯುತ್ ಉತ್ಪಾದನೆ ಮಾಡುವ ಪ್ರಯೋಗ ವಿಫಲವಾಗಿದ್ದು, ಮುಂದಿನ ಆಯ್ಕೆ ಅನಿಲ ಉತ್ಪಾದನೆ ಮಾತ್ರ ಎಂದು ಮಾಹಿತಿ ನೀಡಿದ್ದಾರೆ.

**<><*<><>*><>**

ಅಂಗನವಾಡಿ ಕಾರ್ಯಕರ್ತೆಯರ ಬಗ್ಗೆ ಸರ್ಕಾರಕ್ಕೆ ಬದ್ಧತೆ ಇದ್ದು, ಈ ಬಾರಿಯ ಆಯವ್ಯಯದ ನಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಗೌರವ ಧನ ಹೆಚ್ಚಿಸುವ ಮೂಲಕ ಚುನಾವಣಾ ಪ್ರಣಾಳಿಕೆಯಲ್ಲಿ ಕೊಟ್ಟ ಭರವಸೆಯನ್ನು ಈಡೇರಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ಪರಿಷತ್‌ನಲ್ಲಿ ಬಿಜೆಪಿ ಸದಸ್ಯ ಪ್ರತಾಪ್ ಸಿಂಹ ನಾಯಕ್ ಪ್ರಶ್ನೆಗೆ ಉತ್ತರಿಸಿದ ಅವರು ಅಂಗನವಾಡಿ ಕಾರ್ಯಕರ್ತೆಯರಿಗೆ ಒಂದು ಸಾವಿರ ಹಾಗೂ ಅಂಗನವಾಡಿ ಸಹಾಯಕಿಯರಿಗೆ ೭೫೦ ರೂಪಾಯಿ ಹೆಚ್ಚಿಸಲಾಗಿದೆ. ಇದರಿಂದ ವರ್ಷಕ್ಕೆ ಇಲಾಖೆಗೆ ೧೪೪ ಕೋಟಿ ರೂಪಾಯಿ ಅನುದಾನ ಹೊರೆಯಾಗಿದೆ. ೨೦೧೭ರಲ್ಲಿ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದ ವೇಳೆ ಗೌರವ ಧನದವನ್ನು ೨ ಸಾವಿರ ರೂಪಾಯಿ ಗೌರವ ಧನವನ್ನು ಹೆಚ್ಚಿಸಲಾಗಿತ್ತು. ಬಿಜೆಪಿ ಸರ್ಕಾರದ ನಾಲ್ಕು ವರ್ಷಗಳ ಅವಧಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಗೌರವ ಧನವನ್ನು ಒಂದು ರೂಪಾಯಿಯೂ ಹೆಚ್ಚಿಸಿರಲಿಲ್ಲ ಎಂದು ಸದನಕ್ಕೆ ತಿಳಿಸಿದರು. ಮೇಲ್ಮನೆಯಲ್ಲಿ ಸದಸ್ಯ ಚಿದಾನಂದ ಎಂ.ಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ , ಪಿಡಿಓಗಳ ಜೇಷ್ಠತೆಗೆ ಸಂಬಂಧಿಸಿದಂತೆ ಇರುವ ಗೊಂದಲಗಳನ್ನು ಆದಷ್ಟು ಬೇಗ ನಿವಾರಿಸಿ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ ವಹಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

**<><*<><>*><>**

ವಿಧಾನಸಭೆ ಹಾಗೂ ವಿಧಾನಪರಿಷತ್ ಕಲಾಪಗಳ ಕುರಿತ ಸಮಗ್ರ ಚಿತ್ರಣ ವಿಧಾನಮಂಡಲದಲ್ಲಿ ಇಂದು ವಿಶೇಷ ಸಂಚಿಕೆಯಲ್ಲಿ ೭ ಗಂಟೆ ೪೫ ನಿಮಿಷದಿಂದ ೮ ಗಂಟೆವರೆಗೆ ಮೂಡಿ ಬರಲಿದೆ.

**<><*<><>*><>**

ಕರ್ನಾಟಕ ಉಚ್ಚ ನ್ಯಾಯಾಲಯ ೧೫೮ ನ್ಯಾಯಾಧೀಶರ ಹುದ್ದೆಗೆ ನೇರ ನೇಮಕಾತಿ ನಡೆಸುವ ಕುರಿತು ಹೊರಡಿಸಿದ್ದ ಅಧಿಸೂಚನೆಯನ್ನು ಸುಪ್ರೀಂಕೋರ್ಟ್‌ನ ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಲಾಗಿದೆ ಎಂದು ಹೈಕೋರ್ಟ್ ರಿಜಿಸ್ಟರ್ ಪ್ರಕಟಣೆ ಮೂಲಕ ತಿಳಿಸಿದ್ದಾರೆ. ಅಧಿಸೂಚನೆ ರದ್ದುಗೊಳಿಸುವಂತೆ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿರುವ ಹಿನ್ನೆಲೆಯಲ್ಲಿ ನ್ಯಾಯಾಧೀಶರ ನೇಮಕಾತಿ ಪ್ರಕ್ರಿಯೆಯನ್ನು ತಡೆ ಹಿಡಿಯಲಾಗಿದೆ.

**<><*<><>*><>**

ಸಾಮಾನ್ಯ ಮನುಷ್ಯರಾಗಿ ಹುಟ್ಟಿ, ದೈವತ್ವಕ್ಕೆ ಏರಿದ ಮಹಾನ್ ಪುರುಷ ಯೋಗಿ ನಾರೇಯಣ ಯಂತೀದ್ರರು ಎಂದು ಚಿತ್ರದುರ್ಗ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಕೈವಾರ ತಾತಯ್ಯ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಬದುಕಿನ ಉದ್ದಕ್ಕೂ ಅನೇಕ ಪವಾಡಗಳನ್ನು ಮಾಡಿದ ಯೋಗಿ ನಾರೇಯಣರು ಸಮಾಜದಲ್ಲಿನ ಅಂಕು ಡೊಂಕುಗಳನ್ನು ತಿದ್ದಿದವರು ಎಂದು ಸ್ಮರಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಯೋಗಿ ನಾರೇಯಣರ ಯತೀಂದ್ರರ ಜಯಂತಿಯನ್ನು ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಆಚರಿಸಲಾಯಿತು.

<><*<><>*><>

ರಾಜ್ಯದ ವಿವಿಧೆಡೆ ಇಂದು ಸಂಭ್ರಮದಿಂದ ಹೋಳಿ ಹಬ್ಬ ಆಚರಿಸಲಾಗುತ್ತಿದೆ. ಮಹಿಳೆಯರು, ಮಕ್ಕಳಾದಿಯಾಗಿ ಪರಸ್ಪರ ಬಣ್ಣ ಎರಚಿ, ಹೋಳಿ ಆಚರಿಸುತ್ತಿದ್ದಾರೆ. ಬೆಳಗಾವಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಹೋಳಿ ಹಬ್ಬದ ಬಣ್ಣದಾಟವನ್ನು ಅತ್ಯಂತ ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಪ್ರತಿ ಬಡಾವಣೆಗಳಲ್ಲಿ ತಂಡೋಪ ತಂಡವಾಗಿ ಮಕ್ಕಳು, ಮಹಿಳೆಯರು, ಪುರುಷರು ಪರಸ್ಪರ ಬಣ್ಣದಲ್ಲಿ ಮಿಂದೆದ್ದ ಸಂಭ್ರಮಿಸಿದ ದೃಶ್ಯ ಕಂಡುಬಂದಿತು. ಆಕಾಶವಾಣಿಯೊಂದಿಗೆ ಮಾತನಾಡಿದ ಶಾಸಕ ಅಭಯ ಪಾಟೀಲ್ ಜನರ ಕಷ್ಟಗಳು ದೂರಸರಿದು ಬದುಕಿನ ಬಣ್ಣ ಮೂಡಲಿ ಎಂದು ಹಾರೈಸಿದ್ದಾರೆ.

**ಧ್ವನಿ : ಅಭಯ ಪಾಟೀಲ, ಶಾಸಕ**

ಹುಬ್ಬಳ್ಳಿ ಜಗ್ಗಲಗಿ ಹಬದಂದು ಇದೇ ಭಾನುವಾರದಂದು ಮೂರುಸಾವಿರಮಠದ ಮೈದಾನದಿಂದ ಮೆರವಣಿಗೆ ಆಯೋಜಿಸಲಾಗಿದೆ ಎಂದು ಹುಬ್ಬಳ್ಳಿಯ ಮೂರುಸಾವಿರಮಠದ ಜಗದ್ಗುರು ಡಾ.ಗುರುಸಿದ್ಧ ರಾಜಯೋಗೀಂದ್ರ ಮಹಾಸ್ವಾಮಿ ತಿಳಿಸಿದ್ದಾರೆ.

**ಧ್ವನಿ: ಜಗದ್ಗುರು ಡಾ.ಗುರುಸಿದ್ಧ ರಾಜಯೋಗೀಂದ್ರ ಮಹಾಸ್ವಾಮಿ**

<><*<><>*><>

ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಮೊದಲ ಆರೋಪಿ ನಟಿ ರನ್ಯಾರಾವ್ ಜಾಮೀನು ಅರ್ಜಿಯನ್ನು ಬೆಂಗಳೂರಿನ ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ ವಜಾಗೊಳಿಸಿದೆ. ಎರಡನೇ ಆರೋಪಿ ತರುಣ್‌ರಾಜ್‌ಗೂ ಬೆಂಗಳೂರಿನ ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ ನ್ಯಾಯಾಂಗ ಬಂಧನ ವಿಧಿಸಿದೆ. ದುಬೈನಿಂದ ಅಕ್ರಮ ಚಿನ್ನ ಕಳ್ಳಸಾಗಣೆ ವೇಳೆ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ರನ್ಯಾರಾವ್ ಅವರನ್ನು ಕಂದಾಯ ಗುಪ್ತಚರ ಇಲಾಖೆಯ ಅಧಿಕಾರಿಗಳು ಬಂಧಿಸಿದ್ದರು. ಈ ನಡುವೆ ಜಾರಿ ನಿರ್ದೇಶನಾಲಯ ಹಾಗೂ ಸಿಬಿಐ ಅಧಿಕಾರಿಗಳು ರನ್ಯಾರಾವ್ ನಿವಾಸದ ಮೇಲೆ ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ.

<><*<><>*><>

ಯುಗಾದಿ ಉತ್ಸವಕ್ಕಾಗಿ ಆಂಧ್ರಪ್ರದೇಶದ ಶ್ರೀಶೈಲ ದೇವಸ್ಥಾನ ಸಜ್ಜುಗೊಳ್ಳುತ್ತಿದೆ. ಯುಗಾದಿಯ ಉತ್ಸವ ದಿನಗಳಾದ ಇದೇ ೨೭ ರಿಂದ ೩೧ರವರೆಗೆ ಶ್ರೀ ಮಲ್ಲಕಾರ್ಜುನ ಸ್ವಾಮಿಯ ಸ್ಪರ್ಶ ದರ್ಶನಕ್ಕೆ ಅವಕಾಶವಿಲ್ಲ.

ಹಾಗಾಗಿ ಯುಗಾದಿ ಉತ್ಸವಗಳು ಪ್ರಾರಂಭವಾಗುವ ಹತ್ತು ದಿನಗಳ ಮೊದಲು ಅಂದರೆ ಇದೇ ೧೭ ರಿಂದ ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಕ್ಷೇತ್ರಕ್ಕೆ ಆಗಮಿಸುತ್ತಾರೆ. ಭಕ್ತರಿಗೆ ಇದೇ ೧೭ ರಿಂದ ೨೯ರವರೆಗೆ ನಿರ್ದಿಷ್ಟ ಸಮಯದಲ್ಲಿ ಸ್ಪರ್ಶದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಯುಗಾದಿ ಉತ್ಸವಗಳಿಗಾಗಿ ಸುಮಾರು ೮ ಲಕ್ಷ ಭಕ್ತರು ಕ್ಷೇತ್ರಕ್ಕೆ ಆಗಮಿಸುವ ನಿರೀಕ್ಷೆಯಿದೆ. ಇದಕ್ಕಾಗಿ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಆಂಧ್ರಪ್ರದೇಶ ಸರ್ಕಾರದ ಧಾರ್ಮಿಕದತ್ತಿ ಇಲಾಖೆ ತಿಳಿಸಿದೆ. ಆನ್‌ಲೈನ್ ಬುಕ್ಕಿಂಗ್ ಮತ್ತು ನಿರ್ದಿಷ್ಟ ಸಮಯದಲ್ಲಿ ಕೌಂಟರ್‌ಗಳಲ್ಲಿ ಸ್ಪರ್ಶದರ್ಶನ ಟಿಕೆಟ್‌ಗಳು ಲಭ್ಯವಿರುತ್ತದೆ. ಟಿಕೆಟ್ ಶುಲ್ಕವಾಗಿ ೫೦೦ ರೂಪಾಯಿ ನಿಗದಿಪಡಿಸಲಾಗಿದೆ. ಪ್ರತಿ ಹಂತದಲ್ಲಿ ಒಂದು ಸಾವಿರದ ೫೦೦ ಟಿಕಟ್‌ಗಳನ್ನು ಮಾತ್ರ ವಿತರಿಸಲಾಗುವುದು ಎಂದು ಶ್ರೀಶೈಲ ಮಹಾಕ್ಷೇತ್ರದ ಕಾರ್ಯನಿರ್ವಾಹಕ ಅಧಿಕಾರಿ ಎಂ. ಶ್ರೀನಿವಾಸರಾವ್ ತಿಳಿಸಿದ್ದಾರೆ.

**<><*<><>*><>**

ರಾಜಭವನದಲ್ಲಿ ಇದೇ ೧೭ ರಂದು ಸೋಮವಾರ ಸ್ಕೌಟ್ಸ್ ಮತ್ತು ಗೈಡ್ಸ್ ಕೆಡೆಟ್ಸ್‌ಗಳಿಗೆ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ. ಚತುರ್ಥ ಚರಣ್ ಕ್ಲಬ್, ಹೀರಕ್ ಪಂಖ್, ಬುಲ್‌ಬುಲ್ಸ್, ಸ್ಕೌಟ್ಸ್ ಮತ್ತು ಗೈಡ್ಸ್, ರೋವರ್ಸ್ ಮತ್ತು ರೇಂಜರ್ಸ್‌ಗಳಿಗೆ ರಾಜ್ಯ ಪುರಸ್ಕಾರ ನೀಡಲಾಗುತ್ತಿದೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಭಾಗವಹಿಸಲಿದ್ದಾರೆ.

**<><*<><>*><>**

ಹೊಸಪೇಟೆ ನಗರದಲ್ಲಿ ಉಪಲೋಕಾಯುಕ್ತರ ಸಾರ್ವಜನಿಕರ ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಒಟ್ಟು ೧೮೩ ಅಹವಾಲುಗಳು ಸ್ವೀಕೃತವಾಗಿವೆ ಎಂದು ಉಪ ಲೋಕಾಯುಕ್ತ ಬಿ.ವೀರಪ್ಪ ತಿಳಿಸಿದ್ದಾರೆ. ಮೂರು ದಿನಗಳ ಕಾಲ ವಿಜಯನಗರ ಜಿಲ್ಲಾ ಪ್ರವಾಸ ಕೈಗೊಂಡಿರುವ ಉಪಲೋಕಾಯುಕ್ತರು ಇಂದು ಹೊಸಪೇಟೆಯ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ಹೊಸಪೇಟೆಯ ಕೃಷಿ ಉತ್ಪನ್ನ ಮಾರುಕಟ್ಟೆಗೆ ಭೇಟಿ ನೀಡಿ ಸ್ವಚ್ಛತೆ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ಸೂಚಿಸಿದರು. ಕೃಷಿ ಮಾರಾಟಗಾರರ ರಸೀದಿ ಪುಸ್ತಕ ಪರಿಶೀಲನೆ ನಡೆಸಿ ರೈತರಿಂದ ಕಮಿಷನ್ ಪಡೆಯುವುದು ತಪ್ಪು ಎಂದು ತಿಳಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**